# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಹೆಚ್.ಎ.ಎಲ್ ಏರ್‌ಪೋರ್ಟ್
## ಉಪವಿಭಾಗ ಮಹದೇವಪುರ ವಲಯ, ಬೆಂಗಳೂರು

ಸಂಖ್ಯೆ.ಬಿಬಿಎಂಪಿ/ಸ.ಕಾ.ಅ/ಹೆಚ್.ಎ.ಎಲ್/ಪಿಆರ್/ 03 /2022-23 ದಿನಾಂಕ: 23-09-2022

### 03 ನೇ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಾನ್ಯ ಆಯುಕ್ತರು ಕಛೇರಿ ಆದೇಶ ಸಂ: ಬಿ12(5)/ಪಿಆರ್/35/2020–21 ದಿನಾಂಕ:04/04/2022, ಆದೇಶದಂತೆ ಜಂಟಿ ಆಯುಕ್ತರು ಮಹದೇವಪುರ ವಲಯ ರವರ ಕಛೇರಿ ಆದೇಶ ಸಂ:ಜಂಆ/ಮವ/ಪಿ.ಎಸ್/ 1651/2022–23 ದಿನಾಂಕ: 18–07–2022 ರಂತೆ ಶ್ರೀ.ಸೋಮಯ್ಯ.ಜಿ.ಡಿ, ಸಹಾಯಕ ಅಭಿಯಂತರು (ವಾರ್ಡ್ ನಂ–91 .ಎ.ನಾರಾಯಣಪುರ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರನ್ನು ವಾರ್ಡ್ ನಂ–91 .ಎ.ನಾರಾಯಣಪುರದ ವಾರ್ಡ್ ಸಮಿತಿ ಸಭೆಯ ನೋಡಲ್ ಅಧಿಕಾರಿಯನಾಗಿ ನೇಮಿಸಿರುತ್ತಾರೆ. ಅದರಂತೆ ದಿನಾಂಕ:23–09–2022ರಂದು ನೋಡಲ್ ಅಧಿಕಾರಿಯಾದ ಶ್ರೀ.ಸೋಮಯ್ಯ.ಜಿ.ಡಿ, ಸಹಾಯಕ ಅಭಿಯಂತರು (ವಾರ್ಡ್ ನಂ–91 ಎ.ನಾರಾಯಣಪುರ) ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತೆ ಇರುತ್ತದೆ.

ಉಪಸ್ಥಿತರು:

| ಕ್ರಸಂ | ಹೆಸರು | ಹುದ್ದೆ |
|---|---|---|
| | | ಅಧಿಕಾರಿಗಳು |
| 1 | ಶ್ರೀ.ಜಿ.ಡಿ.ಸೋಮಯ್ಯ | ವಾರ್ಡ್ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ನಂ.56 ಎ.ನಾರಾಯಣಪುರ |
| 2 | ಶ್ರೀ. ಪ್ರಭಾಕರನ್ | ಕಂದಾಯ ಪರಿವೀಕ್ಷಕರು |
| 3 | ಶ್ರೀಮತಿ.ಮಂಗಳ | ಹಿರಿಯ ಆರೋಗ್ಯ ನಿರೀಕ್ಷಕರು |
| 4 | ಶ್ರೀಮತಿ.ಸುವರ್ಣ ಹೆಚ್.ಸಿ | ಕಿರಿಯ ಆರೋಗ್ಯ ನಿರೀಕ್ಷಕರು |
| 5 | ಶ್ರೀ.ಮಹಂತೇಶ್ ಗೌಡ | ಪಶು ವೈದ್ಯಕೀಯ ನಿರ್ವಾಹಕರು,ಕೆ.ಆರ್.ಪುರ |
| 6 | ಶ್ರೀಮತಿ.ಡಾ॥ ರಚನ | ಆರೋಗ್ಯ ಅಧಿಕಾರಿ ವಾರ್ಡ್ ನಂ 91 ಪ್ರಾಥಮಿಕ ಆರೋಗ್ಯ ಕೇಂದ್ರ ಎ.ನಾರಾಯಣಪುರ |
| 7 | ಶ್ರೀ.ಮಹೇಶ್.ಎಸ್ | ಸಹಾಯಕ ಅಭಿಯಂತರರು, (ಬೆಸ್ಕಾಂ) |
| 8 | ಶ್ರೀ.ಅಭಿಲಾಷ್.ಪಿ | ಕಿರಿಯ ಅಭಿಯಂತರರು, (ಬೆಸ್ಕಾಂ) |
| 9 | ಶ್ರೀ.ವೆಂಕಟರಮಣಪ್ಪ.ಎಸ್ | ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 10 | ಶ್ರೀ.ಗಂಗಾಧರಪ್ಪ | ಕೆಲಸದ ಪರಿವೀಕ್ಷಕರು( ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 11 | ಶ್ರೀ.ರಾಜಪ್ಪ.ಕೆ | ಟ್ರಾಫಿಕ್ ಪೊಲೀಸ್, ಕೆ.ಆರ್.ಪುರ |
| 12 | ಶ್ರೀ.ವಿಶ್ವನಾಥ್.ಎಸ್ | ಪೊಲೀಸ್ ಸಬ್‌ಇನ್ಸ್‌ಪೆಕ್ಟರ್, ಮಹದೇವಪುರ |
| 13 | ಶ್ರೀ.ಶಂಕರ್‌ನಾಗ್ | ವಾರ್ಡ್ ಮಾರ್ಷಲ್ |
| | | ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು |
| 14 | ಶ್ರೀ.ಸುರೇಶ್ .ವಿ | ಎ–ನಾರಾಯಣಪುರ |
| 15 | ಶ್ರೀ.ವಸಂತ್ | ಎ–ನಾರಾಯಣಪುರ |
| 16 | ಶ್ರೀ.ಸುನಿಲ್ | ಎ–ನಾರಾಯಣಪುರ |
| 17 | ಶ್ರೀ.ಎ.ಗಣೇಶ್ | ಎ–ನಾರಾಯಣಪುರ |

| | | |
|---|---|---|
| 18 | ಶ್ರೀ.ರಾಮುಲು ರೆಡ್ಡಿ | ಎ-ನಾರಾಯಣಪುರ |
| 19 | ಶ್ರೀ. ಚಿಟ್ಟಿ | ಎ-ನಾರಾಯಣಪುರ |
| 21 | ಶ್ರೀ. ಶಂಕರ್ | ಎ-ನಾರಾಯಣಪುರ |
| 22 | ಶ್ರೀ.ರಮೇಶ್ | ಎ-ನಾರಾಯಣಪುರ |
| 23 | ಶ್ರೀ. ಅರುಣಾಚಲಂ | ಎ-ನಾರಾಯಣಪುರ |

ನಡಾವಳಿ 1. ಕೋವಿಡ್-19ರ ಸಾಂಕ್ರಮಿಕ ರೋಗಕ್ಕೆ ಸಂಬಂಧಿಸಿದಂತೆ, ಸಾಂಬಾವ್ಯ ನಾಲ್ಕನೇ ಅಲೆಯನ್ನು ನಿಯಂತ್ರಿಸುವ ಬಗ್ಗೆ ಮತ್ತು ಸೊಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ.

ಆರೋಗ್ಯಾಧಿಕಾರಿಗಳು ಗೈರಾಜರಾಗಿರುತ್ತಾರೆ.

ನಡಾವಳಿ 2. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗಳ ಸಂಬಂಧಿಸಿದ ವಿಷಯಗಳ ಬಗ್ಗೆ.

ವಾರ್ಡ್ ವ್ಯಾಪ್ತಿಯಲ್ಲಿ ನೀರಿನ ಒತ್ತಡದ ಸಮಸ್ಯೆ ಇರುವುದರಿಂದ ಎತ್ತರ ಪ್ರದೇಶಗಳಿಗೆ ಸರಿಯಾದ ಪ್ರಮಾಣದಲ್ಲಿ ನೀರು ಪೂರೈಕೆಯಾಗುತ್ತಿಲ್ಲವೆಂದು ಮತ್ತು ಉದಯನಗರ, ಪೈ ಬಡಾವಣೆ, ನೇತ್ರಾವತಿ ರಸ್ತೆ ಹಾಗೂ ವಿವೇಕಾನಂದ ರಸ್ತೆಯಲ್ಲಿ ನೀರಿನ ವಾಲ್ವ್‌ಗಳಲ್ಲಿ ನೀರು ಸೋರಿಕೆಯಾಗುತ್ತಿರುತ್ತದೆ ಎಂದು ಸಾರ್ವಜನಿಕರು ಮನವಿ ಮಾಡಿಕೊಂಡರು ಅದರಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಕಾರ್ಯಪಾಲಕ ಅಭಿಯಂತರರು ಮಾತಾನಾಡಿ ಸಮಸ್ಯೆಯನ್ನು ಬಗೆಹರಿಸುವುದಾಗಿ ತಿಳಿಸಿದರು.

ಕ್ರಮ: ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಕಾರ್ಯಪಾಲಕ ಅಭಿಯಂತರರು.

ನಡಾವಳಿ 3.ಬೀದಿ ದೀಪಗಳ ನಿರ್ವಹಣೆ ಬಗ್ಗೆ.

ವಾರ್ಡ್ ವ್ಯಾಪ್ತಿಯಲ್ಲಿ ಎಲ್.ಇ.ಡಿ ಬಲ್ಬ್ ಕೊರತೆ ಇದ್ದು, ಎಲ್.ಇ.ಡಿ ಬಲ್ಬ್‌ಗಳ ಗಾತ್ರವು ಚಿಕ್ಕದಾಗಿರುವ ಕಾರಣ ದೊಡ್ಡ ಗಾತ್ರ ಬಲ್ಬ್‌ಗಳು ಬೇಕೆಂದು ಸಾರ್ವಜನಿಕರು ತಿಳಿಸಿರುತ್ತಾರೆ, ಅದರಂತೆ ಕೊಡಲೇ ಕ್ರಮ ವಹಿಸಬೇಕೆಂದು ಸಂಬಂಧಿಸಿದ ಅಭಿಯಂತರರಿಗೆ ತಿಳಿಸಲು ತೀರ್ಮಾನಿಸಲಾಯಿತು.

ನಡಾವಳಿ 4.ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ .

ವಾರ್ಡ್‌ನ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲಾಗಿದ್ದು.ವಾರ್ಡ್ ವ್ಯಾಪ್ತಿಯ ನೇತ್ರಾವತಿ ಮತ್ತು ವಿ.ಎಸ್.ಆರ್. ಬಡಾವಣೆಯಲ್ಲಿ ರಸ್ತೆಗಳ ಕಾಮಗಾರಿ ಮತ್ತು ಚರಂಡಿಯ ಕಾಮಗಾರಿಯನ್ನು ಅರ್ಧಕ್ಕೆ ಸ್ಥಗಿತಗೊಳಿಸಿದು ಪ್ರಾರಂಭಿಸುವಂತೆ ಸಾರ್ವಜನಿಕರು ಒತ್ತಾಯಿಸಿದರು, ಅದರಂತೆ ಸಾರ್ವಜನಿಕರ ಸಮಸ್ಯೆಗಳನ್ನು ಬಗೆಹರಿಸುವಂತೆ ಸಂಬಂಧಪಟ್ಟ ಅಭಿಯಂತರರಿಗೆ ಸೂಚಿಸಲಾಯಿತು.

ಕ್ರಮ: ಸಹಾಯಕ ಅಭಿಯಂತರರು ವಾರ್ಡ್ 91

ನಡಾವಳಿ 5. ಇನ್ನಿತರೆ ವಿಷಯಗಳ ಬಗ್ಗೆ.

5(ಎ).

ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ಸಿ.ಸಿ.ಕ್ಯಾಮರಗಳನ್ನು ಪರಿಶೀಲಿಸಿ ಅದರ ಸಂಪೂರ್ಣ ಜವಾಬ್ದಾರಿಯನ್ನು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೀಡಬೇಕೆಂದು ಮಾಜಿ ಬಿ.ಬಿ.ಎಂ.ಪಿ ಸದಸ್ಯರು ಕೋರಿರುತ್ತಾರೆ, ಅದರಂತೆ ಸಮಸ್ಯೆಯನ್ನು ಬಗೆಹರಿಸುವಂತೆ ಸಭೆಯಲ್ಲಿ ಹಾಜರಿದ್ದ ಸಂಬಂಧಪಟ್ಟ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ಕ್ರಮ: ಸಹಾಯಕ ಅಭಿಯಂತರರು ವಾರ್ಡ್ 91

5(ಬಿ)

ವಾರ್ಡ್ ವ್ಯಾಪ್ತಿಯಲ್ಲಿ ಬರುವ ಹನುಮಾನ್ ಪಾರ್ಕ್‌ನಲ್ಲಿ ಜಿಮ್ ಸಾಮಗ್ರಿಯು ಹಾಳಾಗಿದ್ದು ಮತ್ತು ಭದ್ರತಾ ಸಿಬ್ಬಂದಿಯನ್ನು ನಿಯೋಜಿಸುವಂತೆ ಸಾರ್ವಜನಿಕರು ಕೋರಿರುತ್ತಾರೆ. ಅದರಂತೆ ಸಮಸ್ಯೆಗಳನ್ನು ಬಗೆಹರಿಸುವಂತೆ ಸಭೆಯಲ್ಲಿ ಹಾಜರಿದ್ದ ಸಂಬಂಧಪಟ್ಟ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ಕ್ರಮ: ಸಹಾಯಕ ಅಭಿಯಂತರರು ವಾರ್ಡ್ 91

5(ಸಿ)

ವಾರ್ಡ್ ವ್ಯಾಪ್ತಿಯಲ್ಲಿ ಬರುವ ಮೈತ್ರಿ ಸ್ಕೂಲ್, ಮೆಡೋನಾ ಸ್ಕೂಲ್, ನ್ಯೂ ಬ್ರಿಲಿಯಂಟ್ ಸ್ಕೂಲ್ ಹತ್ತಿರ ಸ್ಕೂಲ್ ಬೀಡುವ ಸಂದರ್ಭದಲ್ಲಿ ಪೋಲಿ ಹುಡುಗರು ಚುಡಾಯಿಸುತ್ತಿರುತ್ತಾರೆ ಎಂದು ಸಾರ್ವಜನಿಕರು ತಿಳಿಸಿರುತ್ತಾರೆ, ಅದರಂತೆ ಸಮಸ್ಯೆಯನ್ನು ಬಗೆಹರಿಸುವಂತೆ ಸಭೆಯಲ್ಲಿ ಹಾಜರಿದ್ದ ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಲಾಯಿತು.

ಕ್ರಮ: ಪೊಲೀಸ್ ಅಧಿಕಾರಿಗಳು, ಮಹದೇವಪುರ.

ನೋಡಲ್ ಅಧಿಕಾರಿ ಹಾಗೂ ಸದಸ್ಯ ಕಾರ್ಯದರ್ಶಿ
ಸಹಾಯಕ ಅಭಿಯಂತರರು ವಾರ್ಡ್ ನಂ.91
ಎ.ನಾರಾಯಣಪುರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಪ್ರತಿಯನ್ನು:-

1. ಮಾನ್ಯ ಜಂಟಿ ಆಯುಕ್ತರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
2. ಮುಖ್ಯ ಅಭಿಯಂತರರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
3. ಕಛೇರಿ ಪ್ರತಿ.